ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಜಿ.ಗಂಗಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಹುಬ್ಬಳ್ಳಿ, ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/7077/2014/ಸನಿಕಾಸ-1, ದಿನಾಂಕ:26.08.2016

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/7077/2014/ ಎಆರ್ಎಲ್ಓ-2, ದಿನಾಂಕ: 07.09.2016.

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಧಾರವಾಡ ಜಿಲ್ಲೆ ಹುಬ್ಬಳ್ಳಿ ತಾಲ್ಲೂಕಿನ ರಾಯನಾಳ ಗ್ರಾಮದ ಊರ ಹೊರಗಿನ ಜಾಗದಲ್ಲಿ 2013 ರಲ್ಲಿ ಆಯುರ್ವೇದ ಆಸ್ಪತ್ರೆಯ ಕಟ್ಟಡವನ್ನು ಕಟ್ಟಿಸಿದ್ದು, ಸದರಿ ಕಟ್ಟಡ ಕಾಮಗಾರಿಯು ಕಳಪೆಯಾಗಿದ್ದು, ಇಲ್ಲಿಯವರೆಗೂ ಸದರಿ ಆಸ್ಪತ್ರೆಗೆ ವಿದ್ಯುತ್ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಔಷಧವನ್ನು ಸಂಸ್ಕರಿಸಲು ಸಹ ಅಲ್ಲಿ ಯಾವುದೇ ವ್ಯವಸ್ಥೆ ಇಲ್ಲ, 2006 ರಲ್ಲಿ ಸದರಿ ಆಸ್ಪತ್ರೆಗೆ ವಿದ್ಯುತ್, ಕುಡಿಯುವ ನೀರು ಹಾಗೂ ಕಂಪೌಂಡ್ ನಿರ್ಮಾಣ ಮಾಡಲು ಒಂದು ಲಕ್ಷ ಹಣ ಖರ್ಚು ಮಾಡಿದ್ದು, ಆದರೆ ಕೇವಲ ಕಂಪೌಂಡನ್ನು ಮಾತ್ರ ನಿರ್ಮಾಣ ಮಾಡಿದ್ದು, ಸದರಿ ಕಂಪೌಂಡನ್ನು ಆಸ್ಪತ್ರೆಯ ಜಾಗದಲ್ಲಿ ಕಟ್ಟದೆ ಹೊರಗಿನ ಬೇರೆಯವರ ಮಾಲ್ಕಿ ಜಾಗದಲ್ಲಿ ಕಟ್ಟಿರುತ್ತಾರೆ. ಆದ್ದರಿಂದ, ಸದರಿ ಮಾಲೀಕರು ತಕರಾರು ಮಾಡಿದಲ್ಲಿ ಕಂಪೌಂಡ್ ಕಟ್ಟಿಸಲು ಖರ್ಚಾದ ಎಲ್ಲಾ

ಅನುದಾನವು ವ್ಯರ್ಥವಾಗುತ್ತದೆ. ಸದರಿ ಅನುದಾನದಲ್ಲಿಯೂ ಸಹ ಕುಡಿಯುವ ನೀರಿಗೆ ಯಾವುದೇ ಹಣ ಖರ್ಚು ಮಾಡಿರುವುದಿಲ್ಲ. ಕೇವಲ ಸಿಂಟೆಕ್ಸ್ ಟ್ಯಾಂಕನ್ನು ಮಾತ್ರ ಖರೀದಿಸಿದ್ದು, ಅದನ್ನು ಸ್ಥಳೀಯ ಸಿಬ್ಬಂದಿ ಮನೆಯಲ್ಲಿ ಉಪಯೋಗಿಸಲು ಕೊಟ್ಟಿರುತ್ತಾರೆ. 2012-13 ರಲ್ಲಿ ಪುನ: ರೂ.50,000/- ಅನುದಾನವನ್ನು 1ನೇ ಎದುರುದಾರರು ಮಂಟೂರು ಗ್ರಾಮದ ಆಸ್ಪತ್ರೆಗೆ ವರ್ಗಾಯಿಸಿರುತ್ತಾರೆ. ಆದರೆ, 2012-13ನೇ ಸಾಲಿನಲ್ಲಿ ಮಂಟೂರು ಗ್ರಾಮದ ಆಸ್ಪತ್ರೆಗೆ ರೂ. 2,50,000/- ಅನುದಾನ ಬಿಡುಗಡೆಯಾಗಿದ್ದು, ಜಿಲ್ಲಾ ಆಯುಷ್ ಇಲಾಖೆ ಮತ್ತು ಹುಬ್ಬಳ್ಳಿಯ ತಾಲ್ಲೂಕು ಪಂಚಾಯತ್ ನಡುವಿನ ಸಮನ್ವಯದ ಕೊರತೆಯಿಂದ 5 ಊರುಗಳ ಬಡ ರೋಗಿಗಳ ಪರಿಸ್ಥಿತಿ ವಿಕೋಪಕ್ಕೆ ಹೋಗಿದ್ದು, ಜಿಲ್ಲಾ ಪಂಚಾಯತ್ ಸಿಇಓ ರವರಿಗೆ ಈ ಎಲ್ಲಾ ವಿಷಯಗಳನ್ನು ತಿಳಿಸಿದ್ದರೂ ಸಹ ಅನುದಾನದ ಹಣವು ಸಾಕಾಗುವುದಿಲ್ಲ. ಮುಂದೇ ಸರಿ ಮಾಡೋಣವೆಂದು ಹೇಳುತ್ತಿದ್ದು, ತಮ್ಮ ಆಪ್ತ ಗುತ್ತಿಗೆದಾರರಿಂದ ಮೇಲೆ ಮೇಲೆ ಕಾಣುವಂತೆ ಕೆಲಸ ಮಾಡಿಸುತ್ತಿದ್ದು, ಸರ್ಕಾರದಿಂದ ಬಂದ ಔಷಧಿಗಳನ್ನು ರೋಗಿಗಳಿಗೆ ಕೊಡದೆ ಕಸದ ತೊಟ್ಟಿಗೆ ಹಾಕಿದ್ದಾರೆಂದು ಆರೋಪಿಸಿ ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಧಾರವಾಡ ಜಿಲ್ಲೆ ಹುಬ್ಬಳ್ಳಿ ತಾಲ್ಲೂಕಿನ ರಾಯನಾಳ ಗ್ರಾಮದ ನಿವಾಸಿಯಾದ ಶ್ರೀ ಗಂಗಾಧರ ಜಿ.ಇನಾಪುರಮಠ, ಇವರು ದೂರನ್ನು ನೀಡಿರುತ್ತಾರೆ.

| ಕ್ರ.ಸಂ | ಅಧಿಕಾರಿಯ ಹೆಸರು<br>ಶ್ರೀ/ಶ್ರೀಮತಿ | ಎದುರುದಾರರ ಸಂಖ್ಯೆ: |
|---|---|---|
| 1. | ಎಂ.ಬಿ.ಗಂಗಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುಬ್ಬಳ್ಳಿ | 1 |
| 2. | ಆಯುಷ್ ಇಲಾಖೆಯ ಜಿಲ್ಲಾ ವ್ಯವಸ್ಥಾಪಕರು | 2 |

ದೂರುದಾರರು ಸಲ್ಲಿಸಿರುವ ದೂರು ಅರ್ಜಿಯ ಬಗ್ಗೆ ಎದುರುದಾರರಗಳಿಂದ ಆಕ್ಷೇಪಣೆ/ಉತ್ತರವನ್ನು, ಹಾಗೂ ಎದುರುದಾರರು ನೀಡಿರುವ ಆಕ್ಷೇಪಣೆ ಬಗ್ಗೆ ದೂರುದಾರರಿಂದ ಪ್ರತ್ಯುತ್ತರವನ್ನು ಪಡೆದು ಪರಿಶೀಲಿಸಲಾಗಿ, ಕಟ್ಟಡ ಕಾಮಗಾರಿಯನ್ನು ವಹಿಸಿಕೊಂಡಿದ್ದ ಆಗಿನ ಅಂದರೆ 2012ನೇ ಸಾಲಿನ ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪವಿಭಾಗ ಹೊಸೂರು, ಹುಬ್ಬಳ್ಳಿ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶ್ರೀ ರವೀಂದ್ರ ಗುರುಲಿಂಗಯ್ಯ ಹಿರೇಮಠ, ಇವರು

ಕರ್ತವ್ಯಲೋಪವೆಸಗಿರುವುದು ಕಂಡು ಬಂದಿರುವುದರಿಂದ. ಸದರಿಯವರನ್ನು 3ನೇ ಎದುರುದಾರರನ್ನಾಗಿ ಪರಿಗಣಿಸಲಾಗಿರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ತಿಳಿಸಲಾಗಿರುತ್ತದೆ.

ಕಡತ ಮತ್ತು ಸಂಬಂಧಪಟ್ಟ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶಗಳು ಕಂಡು ಬಂದಿರುತ್ತವೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ವರದಿಸಲಾಗಿರುತ್ತದೆ.

1. 2003-04ನೇ ಸಾಲಿನಲ್ಲಿ ಬಿಡುಗಡೆಯಾದ ರೂ.3.21 ಲಕ್ಷ ಅನುದಾನದಲ್ಲಿ ನೀರು, ವಿದ್ಯುತ್‌ನ್ನು ಒದಗಿಸದೆ, ಕಂಪೌಂಡನ್ನು ನಿರ್ಮಿಸದೆ, ಕೇವಲ ಆಸ್ಪತ್ರೆಯ ಕಟ್ಟಡವನ್ನು ಮಾಡಿ, ಸದರಿ ಚಿಕಿತ್ಸಾಲಯವನ್ನು ರಾಯನಾಳ ಗ್ರಾಮ ಪಂಚಾಯತ್ ರವರಿಗೆ ಧಾರವಾಡ ಪಿಆರ್‌ಇ ವಿಭಾಗ ರವರು ಹಸ್ತಾಂತರಿಸಿ, 2005-06ನೇ ಸಾಲಿನಲ್ಲಿ ರೂ. ಒಂದು ಲಕ್ಷ ಅನುದಾನ ಬಿಡುಗಡೆಯಾದರೂ ಸಹ ಅದರಲ್ಲಿ ಕಂಪೌಂಡನ್ನು ಆಸ್ಪತ್ರೆಗೆ ಮೀಸಲಾದ ಜಾಗದಲ್ಲಿ ನಿರ್ಮಿಸದೆ, ಹೆಚ್ಚುವರಿ ಸರ್ಕಾರಿ ಜಾಗದಲ್ಲಿ ನಿರ್ಮಿಸಿದ್ದು, ಆ ಅನುದಾನದಲ್ಲಿ ಮೂಲಭೂತ ಅವಶ್ಯಕತೆಗಳಾದ ನೀರು ಮತ್ತು ವಿದ್ಯುತ್‌ನ್ನು ಆಸ್ಪತ್ರೆಗೆ ಒದಗಿಸಿಲ್ಲ.
2. ಸದರಿ ಆಸ್ಪತ್ರೆಯ ಕಂಪೌಂಡ್ ಗೋಡೆ ಕಟ್ಟುವುದನ್ನು ಅನಂತರದ ಅನುದಾನದಲ್ಲಿ ಕಟ್ಟಲು ಬರುತ್ತಿತ್ತು. ಹಾಗೆ ಮಾಡದೆ ಸದರಿ ಅನುದಾನದಲ್ಲಿ ಕೇವಲ ಕಂಪೌಂಡನ್ನು ಮಾತ್ರ ಕಟ್ಟಿರುವುದು 1ನೇ ಎದುರುದಾರರ ಕರ್ತವ್ಯ ನಿರ್ಲಕ್ಷ್ಯತೆಯಾಗಿದೆ.
3. ಸದರಿ ಆಸ್ಪತ್ರೆಗೆ ಕಂಪೌಂಡನ್ನು ಆಸ್ಪತ್ರೆಗೆಂದು ನಿಗಧಿಪಡಿಸಿದ ಜಾಗದಲ್ಲಿ ಮಾಡದೇ ಹೆಚ್ಚುವರಿ ಜಾಗದಲ್ಲಿ ಮಾಡಿರುವುದು 3ನೇ ಎದುರುದಾರರ ಕರ್ತವ್ಯ ಲೋಪವಾಗಿದೆ.
4. 1ನೇ ಎದುರುದಾರರು ಸದರಿ ಕಂಪೌಂಡನ್ನು ನಿಗಧಿತ ಸ್ಥಳದಲ್ಲಿ ಕಟ್ಟಲಾಗಿದೆಯೇ ಅಥವಾ ಇಲ್ಲವೇ ಎಂಬುದನ್ನು ಪರಿಶೀಲಿಸದೆ ಮಂಜೂರಾದ ಅನುದಾನದ ಹಣವನ್ನು ಸಂಬಂಧಪಟ್ಟ ಗುತ್ತಿಗೆದಾರರಿಗೆ ಪಾವತಿಸಿರುವುದು ಹಾಗೂ 2012-13ನೇ ಸಾಲಿನಲ್ಲಿ ಬಿಡುಗಡೆಯಾದ ರೂ. 50,000/-ಅನುದಾನವನ್ನು ಮೂಲಭೂತ ಸೌಕರ್ಯಗಳಾದ ವಿದ್ಯುತ್ ಹಾಗೂ ನೀರು ಪೂರೈಸಲು 1ನೇ ಎದುರುದಾರರು ಖರ್ಚು ಮಾಡದೇ ಸದರಿ ಹಣವು ಸಾಕಾಗುವುದಿಲ್ಲವೆಂಬ ನೆಪವೊಡ್ಡಿ, ಅದನ್ನು ಬೇರೆ ಆಸ್ಪತ್ರೆಗೆ ವರ್ಗಾವಣೆ ಮಾಡಿರುವುದು 1ನೇ ಎದುರುದಾರರ ಕರ್ತವ್ಯ ನಿರ್ಲಕ್ಷತೆಯಾಗಿದೆ.

2ನೇ ಎದುರುದಾರರಾದ ಆಯುಷ್ ಜಿಲ್ಲಾ ವ್ಯವಸ್ಥಾಪಕರ ಯಾವುದೇ ಕರ್ತವ್ಯಲೋಪ ಇರುವುದಿಲ್ಲವಾದ್ದರಿಂದ, ಸದರಿಯವರ ವಿರುದ್ಧದ ನಡವಳಿಗಳನ್ನು ಕೈಬಿಡಲಾಗಿರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ಶಿಫಾರಸ್ಸು ಮಾಡಲಾಗಿರುತ್ತದೆ.

ಎದುರುದಾರರು 1 ಮತ್ತು 3ನೇ ಅಧಿಕಾರಿ/ನೌಕರರುಗಳು ನೀಡಿರುವ ಲಿಖಿತ ರಕ್ಷಣಾ ಹೇಳಿಕೆಗಳು ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಸದರಿ ಆರೋಪಿತ ಅಧಿಕಾರಿಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಹಾಗೂ 3ನೇ ಎದುರುದಾರರು ಈಗಾಗಲೇ ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲುಯ ಕೆ.ಸಿ.ಎಸ್.ಆರ್. ನಿಯಮ 214(2)(ಬಿ)(i) ರನ್ವಯ ಅನುಮೋದನೆಯನ್ನು ನೀಡುವಂತೆ, ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ಅಪರ ನಿಬಂಧಕರು, ಕರ್ನಾಟಕ ಲೋಕಾಯಕ್ತ, ಇವರು ಕೋರಿರುತ್ತಾರೆ.

| ಕ್ರ.ಸಂ | ಅಧಿಕಾರಿಯ ಹೆಸರು ಶ್ರೀ/ಶ್ರೀಮತಿ | ಎದುರುದಾರರ ಸಂಖ್ಯೆ: |
|---|---|---|
| 1. | ಎಂ.ಜಿ.ಗಂಗಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುಬ್ಬಳ್ಳಿ | 1 |
| 2. | ರವೀಂದ್ರ ಗುರುಲಿಂಗಯ್ಯ ಹಿರೇಮಠ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪವಿಭಾಗ | 3 |

ಹಣದುರುಪಯೋಗ ರೂ. ಒಂದು ಲಕ್ಷಗಳನ್ನು ಕಾನೂನಿನಂತೆ, ಸಮವಾಗಿ 1 ಮತ್ತು 3ನೇ ಎದುರುದಾರರುಗಳಿಂದ, ವಸೂಲು ಮಾಡಲು ಹಾಗೂ ಸದರಿಯವರುಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಕ್ರಮಕೈಗೊಳ್ಳುವಂತೆಯೂ ಸಹ ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ಶಿಫಾರಸ್ಸು ಮಾಡಲಾಗಿರುತ್ತದೆ. ಅಂತೆಯೇ ಈ ಬಗ್ಗೆ ನಿಯಮಾನುಸಾರ ಕ್ರಮವಹಿಸುವಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಧಾರವಾಡ, ಇವರಿಗೆ ದಿನಾಂಕ: ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಅದರೊಂದಿಗಿನ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರಗಳು 1 ಮತ್ತು 3 ಇವರುಗಳು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪಲೋಕಾಯುಕ್ತರು, ತಮ್ಮ ವರದಿಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸಿನಂತೆ, ಸದರಿ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ, ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು-1, ಇವರಿಗೆ ವಹಿಸಿಕೊಡಲು ಹಾಗೂ 3ನೇ ಎದುರುದಾರರಾದ ಶ್ರೀ ರವೀಂದ್ರ ಗುರುಲಿಂಗಯ್ಯ ಹಿರೇಮಠ, ಇವರು ಸರ್ಕಾರಿ ಸೇವೆಯಿಂದ ನಿವೃತ್ತಿಹೊಂದಿರುವುದರಿಂದ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಕೆ.ಸಿ.ಎಸ್.ಆರ್. ನಿಯಮ 214(2)(ಬಿ)(i) ರನ್ವಯ ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 187 ವಿಸೇಬಿ 2016 ಬೆಂಗಳೂರು ದಿನಾಂಕ: 28-09-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, 3ನೇ ಎದುರುದಾರರಾದ ಶ್ರೀ ರವೀಂದ್ರ ಗುರುಲಿಂಗಪ್ಪ ಹಿರೇಮಠ, ಹಿಂದಿನ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪವಿಭಾಗ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರನ್ವಯ ಸರ್ಕಾರದ ಮಂಜೂರಾತಿಯನ್ನು ನೀಡಿ, ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು

11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

| ಕ್ರ.ಸಂ | ಅಧಿಕಾರಿಯ ಹೆಸರು ಶ್ರೀ/ಶ್ರೀಮತಿ | ಎದುರುದಾರರ ಸಂಖ್ಯೆ: |
|---|---|---|
| 1. | ಎಂ.ಬಿ.ಗಂಗಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುಬ್ಬಳ್ಳಿ | 1 |
| 2. | ರಮೇಂದ್ರ ಗುರುಲಿಂಗಯ್ಯ ಹಿರೇಮಠ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪವಿಭಾಗ | 3 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

28/9/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ)ರವರ ಕಾರ್ಯದರ್ಶಿ ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಧಾರವಾಡ.
5) ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
4) ನಿಬಂಧಕರು, ಎ.ಆರ್.ಎಲ್ಓ-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
5) ಸಂಬಂಧಿಸಿದ ಅಧಿಕಾರಿಗೆ.(ಮು.ಕಾ.ನಿ.ಅ.ಜಿಪಂ. ಧಾರವಾಡ ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು

2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.